# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ದಿನಾಂಕ:19/06/2021 ರಂದು **ಬೆಳಿಗ್ಗೆ:11.00** ಗಂಟೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಬೇಗೂರು ವಾರ್ಡ್ ಸಂಖ್ಯೆ-192 ರ ವಾರ್ಡ್ ಸಮಿತಿ ಸಭೆಯನ್ನು ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದಂತಹ ಶ್ರೀ.ನೀಲಕಂಠಯ್ಯ.ಕೆ.ಪಿ. ಸಹಾಯಕ ಕಾರ್ಯಪಾಲಕ ಅಭಿಯಂತರರು ರವರ ಸಮ್ಮುಖದಲ್ಲಿ ಅವರ ಅಧ್ಯಕ್ಷತೆಯೊಂದಿಗೆ ಬೇಗೂರು ಉಪ-ವಿಭಾಗದ ಕಛೇರಿಯಲ್ಲಿ ವಾರ್ಡ್ ಸಮಿತಿ ಸಭೆಯನ್ನು ನಡೆಸಲಾಯಿತು.

ವಾರ್ಡ್ ಸಮಿತಿ ಕಾರ್ಯದರ್ಶಿ ಶ್ರೀ.ಚಲುವರಾಜು.ಎಸ್. ಕಿರಿಯ ಅಭಿಯಂತರರು, ವಾರ್ಡ್ ಸಂಖ್ಯೆ-192 ಬೇಗೂರು ರವರು ಸಭೆಗೆ ಹಾಜರಾಗಿದ್ದಂತಹ ಅಧ್ಯಕ್ಷರು, ಸದಸ್ಯರು, ಅಧಿಕಾರಿಗಳು, ಹಾಗೂ ಇತರರನ್ನು ಸ್ವಾಗತಿಸಿ ಕಾರ್ಯಕ್ರಮ ಪ್ರಾರಂಭಿಸಿದರು.

**ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳು:**

1. ಕೋವಿಡ್ ವ್ಯಾಕ್ಸಿನ್ ಲಸಿಕೆಗಳನ್ನು ಹಾಕಿಸಿಕೊಳ್ಳಲು ಸಾರ್ವಜನಿಕರಿಗೆ ತಿಳುವಳಿಕೆ ಮೂಡಿಸುವ ಬಗ್ಗೆ.
2. ಕೋವಿಡ್-19 ಟೆಸ್ಟ್‌ಗಳನ್ನು ಜನನಿಬಿಡ ಪ್ರದೇಶಗಳಲ್ಲಿ ಮುಂದುವರೆಸುವ ಬಗ್ಗೆ.
3. ಕುಡಿಯುವ ನೀರು ಸರಬರಾಜು ಬಗ್ಗೆ,
4. ಘನತ್ಯಾಜ್ಯ ಬ್ಲಾಕ್‌ಸ್ಪಾಟ್‌ಗಳನ್ನು ತೆರವು ಮಾಡುವ ಬಗ್ಗೆ,
5. ವಾರ್ಡ್‌ನ ಸಾರ್ವಜನಿಕರ ಕುಂದುಕೊರತೆಗಳ ಬಗ್ಗೆ,
6. ಬೀದಿ ದೀಪಗಳ ನಿರ್ವಹಣೆಯ ಬಗ್ಗೆ,
7. ರಸ್ತೆ ಗುಂಡಿಗಳನ್ನು ಮುಚ್ಚುವ ಬಗ್ಗೆ,

**ವಾರ್ಡ್ ನಂ-192 ವಾರ್ಡ್ ಸಮಿತಿ ಸಭೆಗೆ ಹಾಜರಾಗಲು ಸೂಚಿಸಿರುವವರ ವಿವರ**

| ಕ್ರ.ಸಂ | ಹೆಸರು | ಹುದ್ದೆ | ಹಾಜರಾತಿ |
|---|---|---|---|
| 1 | ಶ್ರೀ.ನೀಲಕಂಠಯ್ಯ.ಕೆ.ಪಿ. | ಅಧ್ಯಕ್ಷರು/ನೋಡೆಲ್ ಅಧಿಕಾರಿಗಳು | ಹಾಜರಾಗಿರುತ್ತಾರೆ |
| 2 | ಶ್ರೀ.ಚಲುವರಾಜು.ಎಸ್. | ಕಾರ್ಯದರ್ಶಿ (ಕಿ.ಅ.) | ಹಾಜರಾಗಿರುತ್ತಾರೆ |
| 3 | ಶ್ರೀ.ಶ್ರೀಧರ್.ಎಸ್. | ಹಿ.ಆ.ಪ | ಹಾಜರಾಗಿರುತ್ತಾರೆ |
| 4 | ಶ್ರೀ.ಆರ್.ಕುಮಾರ್ | ಬೆಸ್ಕಾಂ. ಸ.ಕಾ.ಅ. | ಹಾಜರಾಗಿರುತ್ತಾರೆ |
| 5 | ಶ್ರೀಮತಿ.ವಿನಯಕುಮಾರಿ | ಸ.ಕಾ.ಅ. ಬಿ.ಡಬ್ಲ್ಯೂ.ಎಸ್.ಎಸ್.ಬಿ | ಹಾಜರಾಗಿರುತ್ತಾರೆ |
| 6 | ಶ್ರೀ.ರಮೇಶ್ | ಸ.ಕಾ.ಅ. ಬೀದಿ ದೀಪ ಇಲಾಖೆ | ಹಾಜರಾಗಿರುತ್ತಾರೆ |
| 7 | ಶ್ರೀ.ಸಂತೋಷ್ ದೀಪು | ಅರಣ್ಯ | ಹಾಜರಾಗಿರುತ್ತಾರೆ |
| 8 | ಶ್ರೀ.ಮಂಜುನಾಥ್ | ಸರ್ಕಲ್ ಇನ್ಸ್‌ಪೆಕ್ಟರ್, ಬೇಗೂರು | ಗೈರುಹಾಜರು |
| 9 | ಶ್ರೀ.ಬಾಲಾಜಿ | ಸ.ಕಾ.ನಿ.ಅ. (ಎಸ್.ಡಬ್ಲ್ಯೂ.ಡಿ) | ಗೈರುಹಾಜರು |
| 10 | ಶ್ರೀ.ರಮೇಶ್ | ಸ.ಕಾ.ನಿ.ಅ. (ರ.ಮು.ಸೌ) | ಗೈರುಹಾಜರು |

Scanned by CamScanner

| | | | |
|---|---|---|---|
| 11 | ಶ್ರೀ.ರಮೇಶ್.ಎಲ್. | ಕಿ.ಆ.ಪ. | ಹಾಜರಾಗಿರುತ್ತಾರೆ |
| 12 | ಶ್ರೀ.ರವಿ | ಬೀದಿ ದೀಪ ನಿರ್ವಹಣೆ | ಗೈರುಹಾಜರು |
| 13 | ಶ್ರೀ.ನರಸಪ್ಪ | ತೋಟಗಾರಿಕೆ ಇಲಾಖೆ | ಗೈರುಹಾಜರು |
| 14 | ಶ್ರೀ.ರಂಗಪ್ಪ ಸ.ಅ. | ಬಿ.ಡಬ್ಲ್ಯೂ.ಎಸ್.ಎಸ್.ಬಿ | ಗೈರುಹಾಜರು |
| 15 | ಶ್ರೀ.ಸ್ವಾಮಿ | ಗುತ್ತಿಗೆದಾರರು | ಹಾಜರಾಗಿರುತ್ತಾರೆ |
| 16 | ಶ್ರೀ.ಎಸ್.ಸಚಿನ್ | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 17 | ಶ್ರೀ.ಮುರಳಿ | ಗುತ್ತಿಗೆದಾರರು | ಹಾಜರಾಗಿರುತ್ತಾರೆ |
| 18 | ಶ್ರೀ.ಗೋವಿಂದರಾಜು | ಗುತ್ತಿಗೆದಾರರು | ಹಾಜರಾಗಿರುತ್ತಾರೆ |
| 19 | ಶ್ರೀ.ಸುನಿಲ್ ಕುಮಾರ್.ಜೆ | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 20 | ಶ್ರೀ.ಅರವಿಂದ | ಸಾರ್ವಜನಿಕರು ಅಭಿಯಂತರರು | ಹಾಜರಾಗಿರುತ್ತಾರೆ |
| 21 | ಶ್ರೀ.ವೇಣುಗೋಪಾಲ್ | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 22 | ಶ್ರೀ.ಮಂಜುನಾಥ್.ಎನ್ | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 23 | ಶ್ರೀ.ಆನಂದ್ ಕುಮಾರ್ | ಗುತ್ತಿಗೆದಾರರು | ಹಾಜರಾಗಿರುತ್ತಾರೆ |

## ಸಭೆಯ ನಡಾವಳಿಗಳು

1. ಕೋವಿಡ್- 19 ಕರೋನಾ ರೋಗವು 2ನೇ ಹಂತದಲ್ಲಿ ಹರಡುತ್ತಿದ್ದು, ವಾರ್ಡ್ ವ್ಯಾಪ್ತಿಯಲ್ಲಿ 18 ವರ್ಷ ಮೇಲ್ಪಟ್ಟ ಸಾರ್ವಜನಿಕರು ಕೋವಿಡ್ ವ್ಯಾಕ್ಸಿನ್ ಚುಚುಮದ್ದು ನೀಡಲು ಆರೋಗ್ಯ ಇಲಾಖೆಯ ವೈದ್ಯಾಧಿಕಾರಿಗಳಿಗೆ ವಾರ್ಡ್ ಸಮಿತಿ ಸಭೆಯಲ್ಲಿ ನೋಡಲ್ ಅಧಿಕಾರಿಗಳು ಸೂಚಿಸಿದರು.

2. ಕೋವಿಡ್-19 ಟೆಸ್ಟ್‌ಗಳನ್ನು ಜನನಿಬಿಡ ಪ್ರದೇಶಗಳಲ್ಲಿ ಮುಂದುವರೆಸುವಂತೆ ಅಧ್ಯಕ್ಷರು ವೈದ್ಯಾಧಿಕಾರಿರವರಿಗೆ ಮಾನ್ಯ ವಾರ್ಡ್ ಕಮಿಟಿ ಅಧ್ಯಕ್ಷರು ಸೂಚಿಸಿದರು
ಕ್ರಮ: ವೈದ್ಯಾಧಿಕಾರಿಗಳು, ಬೇಗೂರು, ಪ್ರಾಥಮಿಕ ಆರೋಗ್ಯ ಕೇಂದ್ರ.

3. ವಾರ್ಡ್ ನಂ-192 ಬೇಗೂರು ವ್ಯಾಪ್ತಿಯಲ್ಲಿ ಕಾವೇರಿ ನೀರಿನ ಕನೆಕ್ಷನ್ ಕೊಟ್ಟು 2 ವರ್ಷವಾಗಿದ್ದು, ಇನ್ನೂ ನೀರಿನ ವ್ಯವಸ್ಥೆ ಮಾಡಿಲ್ಲವೆಂದು ಸ್ಥಳೀಯರು ವಿಚಾರಿಸಿದರು. ಅದೆಲ್ಲವನ್ನು ಚೆಕ್ ಮಾಡಿ ಕುಡಿಯುವ ನೀರಿನ ವ್ಯವಸ್ಥೆ ಮಾಡಿಕೊಡಲು ಬಿ,ಡಬ್ಲ್ಯೂ.ಎಸ್.ಎಸ್.ಬಿ. ಎ.ಇ ಮತ್ತು ಎ.ಇ.ಇ ರವರಿಗೆ ಅಲ್ಲಿಯ ಸಮಸ್ಯೆಯನ್ನು ಬಗೆಹರಿಸಲು ಸೂಚಿಸಿದರು.

4. ಸದರಿ ವಾರ್ಡ್‌ನ ಪರಿವೀಕ್ಷಣಾ ಸಮಯದಲ್ಲಿ ಕುಡಿಯುವ ನೀರಿನ ಸಮಸ್ಯೆ ಇದೆ ಎಂದು ಸ್ಥಳೀಯರು ತಮ್ಮ ಅಳಲನ್ನು ತೋಡಿಕೊಂಡರು. ಬಿ,ಡಬ್ಲ್ಯೂ.ಎಸ್.ಎಸ್.ಬಿ. ಎ.ಇ ರವರಿಗೆ ನೋಡಲ್ ಅಧಿಕಾರಿಗಳು ನೀರಿನ ವ್ಯವಸ್ಥೆ ಮಾಡಿಕೊಡಲು ಸೂಚಿಸಿದರು.

5. ಮಳೆಗಾಲವು ಪ್ರಾರಂಭವಾಗಿರುವುದರಿಂದ ತಾತ್ಕಾಲಿಕ ನಿಯಂತ್ರಣಾ ಕೊಠಡಿಯಲ್ಲಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ಕ್ರಮ ಕೈಗೊಳ್ಳಬೇಕಾಗಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೇಗೂರು ಉಪವಿಭಾಗ ರವರಿಗೆ ನೋಡಲ್ ಅದಿಕಾರಿಗಳು ವಾರ್ಡ್ ಸಮಿತಿ ಅಧ್ಯಕ್ಷರು ಸಭೆಯಲ್ಲಿ ಸೂಚಿಸಿದ್ದರು.

Scanned by CamScanner

6. ಮಳೆಗಾಲ ಪ್ರಾರಂಭವಾಗಿರುವುದರಿಂದ ಬಿ.ಡಬ್ಲ್ಯೂ.ಎಸ್.ಎಸ್.ಬಿ. ವತಿಯಿಂದ ಪೈಪ್‌ಲೈನ್ ಅಳವಡಿಸಲು ರಸ್ತೆಯನ್ನು ಅಗೆದು ದುರಸ್ಥಿಗೊಳಿಸಿದ್ದು, ರಸ್ತೆಯ ಪಕ್ಕದ ಚರಂಡಿಗಳಲ್ಲಿ ತುಂಬಿರುವ ಹೆಚ್ಚುವರಿ ಮಣ್ಣನ್ನು ತೆಗೆದು ಮಳೆಯ ನೀರು ಸರಾಗವಾಗಿ ಚರಂಡಿಯಲ್ಲಿ ಹರಿಯುವಂತೆ ಮಾಡಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ಅನುಕೂಲ ಮಾಡಿಕೊಡಬೇಕಾಗಿ ವಾರ್ಡ್‌ನ ಸಹಾಯಕ ಅಭಿಯಂತರರಿಗೆ ನೋಡಲ್ ಅದಿಕಾರಿಗಳು ವಾರ್ಡ್ ಸಮಿತಿ ಸಭೆಯಲ್ಲಿ ತಿಳಿಸಿದರು.

7. ವಾರ್ಡ್‌ನಲ್ಲಿ ಪಿ.ಎಂ. ಸ್ವಾನಿಧಿ ಸ್ಕೀಮ್ ನಲ್ಲಿ ಬೀದಿ ಬದಿ ವ್ಯಾಪಾರ ಮಾಡುವವರಿಗೆ ಸಾಲ ನೀಡಲು ನೋಡಲ್ ಅಧಿಕಾರಿಗಳು ಸಹಾಯಕ ಕಂದಾಯ ಅಧಿಕಾರಿಗಳಿಗೆ ಸೂಚಿಸಿದರು.

8. ವಾರ್ಡ್ ವ್ಯಾಪ್ತಿಯಲ್ಲಿ ಲಾಕ್‌ಡೌನ್ ಇರುವ ಪ್ರದೇಶದಲ್ಲಿ ಸಾರ್ವಜನಿಕರ ಕುಂದು ಕೊರತೆಗಳನ್ನು ಬಗೆಹರಿಸಿಕೊಡಲು ಗಂಬೀರವಾಗಿ ಪರಿಗಣಿಸಿ ಪರಿಹರಿಸಿಕೊಡಬೇಕೆಂದು ನೋಡಲ್ ಅಧಿಕಾರಿಗಳು ವಾರ್ಡ್‌ನ ಸಹಾಯಕ ಅಭಿಯಂತರರಿಗೆ ವಾರ್ಡ್ ಸಮಿತಿ ಸಭೆಯಲ್ಲಿ ತಿಳಿಸಿದರು.

9. ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್ ಬೀದಿದೀಪಗಳು ಹಾಳಾಗಿದ್ದು, ದುರಸ್ತಿಯಲ್ಲಿದ್ದು, ಅವುಗಳನ್ನು ಸರಿಪಡಿಸಲು ಮತ್ತು ಹೊಸದಾಗಿ ವಿದ್ಯುತ್ ಬೀದಿದೀಪಗಳು ಅವಶ್ಯಕತೆ ಇದ್ದು, ಬೀದಿದೀಪಗಳನ್ನು ಅಳವಡಿಸಲು ಬೀದಿದೀಪದ ಎ.ಇ ರವರಿಗೆ ನೋಡಲ್ ಅಧಿಕಾರಿಗಳು ವಾರ್ಡ್ ಸಮಿತಿ ಸಭೆಯಲ್ಲಿ ಸೂಚಿಸಿದರು.

**<u>ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.</u>**

ಕಾರ್ಯದರ್ಶಿ ಮತ್ತು ಸಂಚಾಲಕರು
ವಾರ್ಡ್ ನಂ -192 ಬೇಗೂರು

19/6
ಅಧ್ಯಕ್ಷರು
ವಾರ್ಡ್ ಕಮಿಟಿ ಅಧ್ಯಕ್ಷರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ವಾರ್ಡ್ ನಂ-192, ಬೇಗೂರು

**ಪ್ರತಿಗಳು:-**

1) ಜಂಟಿ ಆಯುಕ್ತರು (ಬೊಮ್ಮನಹಳ್ಳಿ) ವಲಯ ರವರ ಅವಗಾಹನೆಗೆ,
2) ಉಪ ಆಯುಕ್ತರು (ಬೊಮ್ಮನಹಳ್ಳಿ) ವಲಯ ರವರ ಅವಗಾಹನೆಗೆ,
3) ಸಹಾಯಕ ಕಂದಾಯ ಅಧಿಕಾರಿ (ಬೇಗೂರು) ಉಪವಿಭಾಗ ರವರ ಅವಗಾಹನೆಗೆ,
4) ವಾರ್ಡ್ ಸಮಿತಿ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿ ರವರ ಅವಗಾಹನೆಗೆ,
5) ಕಛೇರಿ ಕಡತಕ್ಕೆ

Scanned by CamScanner